# Akashvani : Bangalore
# Regional Bulletin In Kannada
# 06.02.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**06.02.2026 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ಕೃಷಿ ಉತ್ಪಾದನೋತ್ತರ ಚಟುವಟಿಕೆ ಕೈಗೊಳ್ಳುವಂತೆ ರೈತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ**

**೨. ಐತಿಹಾಸಿಕ ಪ್ರಸಿದ್ಧ ಲಕ್ಕುಂಡಿ ದೇವಸ್ಥಾನ ಕಲ್ಯಾಣಿ ಸಂರಕ್ಷಣೆಗೆ ಕ್ರಮ - ಸಚಿವ ಎಚ್.ಕೆ.ಪಾಟೀಲ್**

**೩. ೫೮೧ ಕೋಟಿ ರೂಪಾಯಿ ಮೊತ್ತದ ಉಪಕರಣ ಪೂರೈಕೆಗೆ ಬೇಡಿಕೆ ಪಡೆದ ಸಾರ್ವಜನಿಕ ಕ್ಷೇತ್ರದ ನವರತ್ನ ರಕ್ಷಣಾ ಉದ್ದಿಮೆ ಬಿಇಎಲ್**

**೪. ಅಳ್ನಾವರ್ - ದಾಂಡೇಲಿ ನಡುವೆ ಹೊಸ ಡೆಮು ರೈಲು ; ನಾಳೆ ಸಚಿವ ಸೋಮಣ್ಣ ಚಾಲನೆ**

**೫. ಮಲೆ ಮಹದೇಶ್ವರ ಮಹಾಶಿವರಾತ್ರಿ ಜಾತ್ರಾ ಮಹೋತ್ಸವ ; ಭಕ್ತರ ಸುರಕ್ಷತೆಗಾಗಿ ಅರಣ್ಯ ಇಲಾಖೆ ಮುನ್ನೆಚ್ಚರಿಕೆ ಕ್ರಮ**

**<><*<><>*><>**

ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ಕೃಷಿಯಲ್ಲಿ ತೊಡಗಬೇಕು ಹಾಗೂ ರೈತರು ಉತ್ಪಾದನೋತ್ತರ ಚಟುವಟಿಕೆ ಕೈಗೊಳ್ಳಲು ಮುಂದಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಅವರು, ಅಂತಾರಾಷ್ಟ್ರೀಯ ವಾಣಿಜ್ಯ ಮೇಳ-೨೦೨೬, ಉತ್ಪಾದನೋತ್ತರ ಕೃಷಿ - ರೈತರ ಸಬಲೀಕರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ರೈತರು ಉದ್ಯಮಿಗಳಾಗಬೇಕು, ಉತ್ಪನ್ನಗಳನ್ನು ಬೆಳೆಯುವ ಜೊತೆಗೆ ಸಂಗ್ರಹಣೆ, ಸಂಸ್ಕರಣೆ, ಮಾರುಕಟ್ಟೆ ಉಪ ಉತ್ಪನ್ನಗಳ ಅಭಿವೃದ್ಧಿಯಲ್ಲಿ ನಿರತರಾಗಬೇಕಿದೆ ಎಂದರು. ಸರ್ಕಾರ ರೈತರಿಗೆ ಬಿತ್ತನೆ ಬೀಜ, ಗೊಬ್ಬರ, ಕೀಟನಾಶಕಗಳನ್ನು ಒದಗಿಸುತ್ತಿದ್ದು, ಯಂತ್ರೋಪಕರಣ ಖರೀದಿಗೆ ೧ ಸಾವಿರದ ೫೦೦ ಕೋಟಿ ರೂಪಾಯಿ ಸಹಾಯ ಧನ ನೀಡುತ್ತಿದೆ. ಬೆಳೆವಿಮೆ ಯೋಜನೆ ಜಾರಿಯಲ್ಲಿ ರಾಜ್ಯ ದೇಶದಲ್ಲೇ ಅಗ್ರಸ್ಥಾನದಲ್ಲಿದ್ದು, ಈವರೆಗೆ ೬ ಸಾವಿರ ಕೋಟಿ ರೂಪಾಯಿ ವಿಮೆ ಪರಿಹಾರವನ್ನು ರೈತರಿಗೆ ವಿತರಿಸಲಾಗಿದೆ ಎಂದರು. ಕೃಷಿಭಾಗ್ಯ ಯೋಜನೆಯಡಿ ಸರ್ಕಾರ ೨೦೦ ಕೋಟಿ ರೂಪಾಯಿ ನೀಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಸಂದರ್ಭಲ್ಲಿ ತಿಳಿಸಿದರು.

**<><*<><>*><>**

ಗದಗ ಜಿಲ್ಲೆಯ ಐತಿಹಾಸಿಕ ಪ್ರಸಿದ್ಧ ಲಕ್ಕುಂಡಿ ಗ್ರಾಮದಲ್ಲಿರುವ ಪುರಾತನ ದೇವಸ್ಥಾನಗಳು ಮತ್ತು ಕಲ್ಯಾಣಿಗಳನ್ನು ಸಂರಕ್ಷಣೆ ಜನರಿಗೆ ಪರಿಚಯಿಸುವ ಕಾರ್ಯವನ್ನು ರಾಜ್ಯ ಸರ್ಕಾರ ಮಾಡಲಿದೆ ಎಂದು ಪ್ರವಾಸೋದ್ಯಮ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಹೇಳಿದ್ದಾರೆ. ಅವರು ಲಕ್ಕುಂಡಿಯಲ್ಲಿಂದು ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಸಹಯೋಗದ ಪಂಚ ದೇವಾಲಯಗಳ ಮತ್ತು ಪಂಚ ಬಾವಿಗಳ ಅನಾವರಣ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ನಂತರ ಸುದ್ದಿ ಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು. ಲಕ್ಕುಂಡಿ ಗ್ರಾಮದ ಪರಿಸರದಲ್ಲಿ ನೂರೊಂದು ಪುರಾತನ ದೇವಸ್ಥಾನಗಳು ಮತ್ತು ಕಲ್ಯಾಣಿಗಳು ಕಲ್ಯಾಣ ಚಾಲುಕ್ಯರ ಮತ್ತು ವಿಜಯನಗರ ಅರಸರ ಆಳ್ವಿಕೆಯಲ್ಲಿ ನಿರ್ಮಾಣವಾಗಿದ್ದವು ಎಂದು ನಮಗೆ ಇತಿಹಾಸದಿಂದ ತಿಳಿಯುತ್ತದೆ. ವಾಸ್ತವದಲ್ಲಿ ಲಕ್ಕುಂಡಿ ಗ್ರಾಮದ ಭೂಮಿಯಲ್ಲಿ ಈ ದೇವಸ್ಥಾನಗಳು ಸಿಲುಕಿವೆ. ಅವುಗಳನ್ನು ಹೊರತಗೆದು ಜಗತ್ತಿಗೆ ಪರಿಚಯಿಸಲು ಉತ್ಖನನ ಕಾರ್ಯ ಪ್ರಾರಂಭವಾಗಿದೆ. ಇದಕ್ಕಾಗಿ ರಾಜ್ಯ ಸರ್ಕಾರ ಅಗತ್ಯ ಅನುದಾನ ನೀಡಲಿದೆ ಎಂದು ತಿಳಿಸಿದ ಸಚಿವ ಪಾಟೀಲ್ ಅವರು, ಉತ್ಖನನ ಕಾರ್ಯಕ್ಕೆ ಲಕ್ಕುಂಡಿಯ ಗ್ರಾಮದ ಜನತೆ ಅಗತ್ಯ ಸಹಾಯ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

**<><*<><>*><>**

ಬೆಂಗಳೂರಿನಲ್ಲಿರುವ ಸಾರ್ವಜನಿಕ ಕ್ಷೇತ್ರದ ರಕ್ಷಣಾ ನವರತ್ನ ಉದ್ದಿಮೆಯಾದ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ೫೮೧ ಕೋಟಿ ರೂಪಾಯಿ ಮೊತ್ತದ ಉಪಕರಣ ಪೂರೈಕೆ ಬೇಡಿಕೆಗಳನ್ನು ಪಡೆದುಕೊಂಡಿದೆ. ರಡಾರ್ ಎಚ್ಚರಿಕೆ ಗ್ರಾಹಕಗಳು, ತಂತ್ರಾಂಶ ಪರಿಹಾರ, ಸಂಪರ್ಕ ಉಪಕರಣಗಳಿಗಾಗಿ ಬೇಡಿಕೆಗಳು ಬಂದಿವೆ ಎಂದು ಬಿಇಎಲ್ ಪ್ರಕಟಣೆ ತಿಳಿಸಿದೆ.

**<><*<><>*><>**

ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಕೊನೆಯ ದಿನವಾದ ಇಂದು ಕನ್ನಡ ಚಿತ್ರರಂಗದಲ್ಲಿ ೫೦ ವರ್ಷಗಳನ್ನು ಪೂರೈಸಿದ ಹಾಗೂ ಚಿತ್ರರಂಗಕ್ಕೆ ಗಣನೀಯ ಕೊಡುಗೆ ನೀಡಿದ ಗಣ್ಯರನ್ನು ಗೌರವಿಸಲಾಯಿತು. ಪದ್ಮಶ್ರೀ ಗಿರೀಶ್ ಕಾಸರವಳ್ಳಿ, ಹಿರಿಯ ನಿರ್ದೇಶಕ ಎಸ್.ವಿ. ರಾಜೇಂದ್ರ ಸಿಂಗ್ ಬಾಬು, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷೆ ಡಾ.ಜಯಮಾಲ ಅವರನ್ನು ಸನ್ಮಾನಿಸಲಾಯಿತು. ನಿರ್ಮಾಪಕಿ ಪಾರ್ವತಮ್ಮ ರಾಜಕುಮಾರ್ ಪರವಾಗಿ ಅವರ ಮಗಳು ಪೂರ್ಣಿಮಾ ರಾಮ್‌ಕುಮಾರ್, ಛಾಯಾಗ್ರಾಹಕ ಎಸ್.ರಾಮಚಂದ್ರ ಪರವಾಗಿ ಅವರ ಸಹೋದರ ಶಂಕರ್ ಐತಾಳ್ ಅವರನ್ನು ಗೌರವಿಸಲಾಯಿತು.

**<><*<><>*><>**

ಕೇಂದ್ರ ಬಜೆಟ್ ಆತ್ಮ ನಿರ್ಭರತೆ ಹಾಗೂ ಉದ್ಯೋಗ ಸೃಷ್ಟಿಗೆ ಪೂರಕವಾಗಿದೆ ಎಂದು ವಿಧಾನಪರಿಷತ್‌ನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದ್ದಾರೆ. ಅವರು, ದೊಡ್ಡಬಳ್ಳಾಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ಬಜೆಟ್‌ನಲ್ಲಿ ಬಡಾ ಹಾಗೂ ಮಧ್ಯಮವರ್ಗದವರಿಗೆ ಹೆಚ್ಚು ಅನುಕೂಲವಾಗುವಂತೆ ಯೋಜನೆಗಳನ್ನು ರೂಪಿಸಲಾಗಿದೆ. ಜವಳಿ

ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದರು. ಮನ್ರೇಗಾ ಯೋಜನೆಯಲ್ಲಿ ಹಿಂದೆ ಇದ್ದ ಯಾಂತ್ರಿಕ ಬಳಕೆ, ಬಿಲ್‌ಗಳಲ್ಲಿ ವಂಚನೆ ಮೊದಲಾದ ಭ್ರಷ್ಟಾಚಾರವನ್ನು ತಡೆಯುವ ಸಲುವಾಗಿ ವಿಬಿ-ಜಿರಾಮ್ ಜಿ ಹೆಸರಿನಲ್ಲಿ ಯೋಜನೆಯನ್ನು ಪರಿಷ್ಕರಿಸಲಾಗಿದ್ದು, ರಾಜ್ಯದ ಕಾಂಗ್ರೆಸ್ ಮುಖಂಡರು ಅನಗತ್ಯವಾಗಿ ಟೀಕೆ ಮಾಡುತ್ತಿದ್ದಾರೆ ಎಂದು ಅವರು ಹೇಳಿದರು.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ವಿವಿಧ ರಾಷ್ಟ್ರೀಯ ಹೆದ್ದಾರಿ ಯೋಜನೆಗಳ ತ್ವರಿತ ಅನುಷ್ಠಾನಕ್ಕೆ ಸಂಬಂಧಿಸಿದಂತೆ ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದ ಕಾರ್ಯದರ್ಶಿ ಉಮಾಶಂಕರ್ ಅವರಿಗೆ ಮನವಿ ಸಲ್ಲಿಸಿದ್ದಾರೆ. ಪ್ರಮುಖವಾಗಿ ಶಿರಾಡಿ ಘಾಟ್ ಹಾಗೂ ಸುರತ್ಕಲ್ -ಬಿ.ಸಿ ರೋಡ್ ಹೆದ್ದಾರಿ ಅಭಿವೃದ್ಧಿ ಯೋಜನೆ ಹಾಗೂ ಮಾಣಿ-ಸಂಪಾಜೆ ನಡುವಿನ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಗ್ಗೆಯೂ ಹೆಚ್ಚಿನ ಗಮನಹರಿಸುವಂತೆ ಸಂಸದರು ಒತ್ತಾಯಿಸಿದ್ದಾರೆ.

<><*<><>*><>

ಅಳ್ನಾವರ - ದಾಂಡೇಲಿ ನಡುವೆ ಹೊಸ ಡೆಮು ರೈಲಿನ ಸೇವೆಗೆ ರೈಲ್ವೆ ಖಾತೆ ರಾಜ್ಯ ಸಚಿವ ಸೋಮಣ್ಣ ನಾಳೆ ದಾಂಡೇಲಿ ರೈಲು ನಿಲ್ದಾಣದಲ್ಲಿ ಚಾಲನೆ ನೀಡಲಿದ್ದಾರೆ. ಈ ಡೆಮು ರೈಲು ಸೇವೆಗಳು ಇದೇ ೯ ರಿಂದ ಕಾರ್ಯಾಚರಣೆ ನಡೆಸಲಿವೆ. ಒಟ್ಟು ೬ ಡೆಮು ರೈಲುಗಳು ಅಳ್ನಾವರ್ ಜಂಕ್ಷನ್-ದಾಂಡೇಲಿ-ಅಳ್ನಾವರ್ ಜಂಕ್ಷನ್ ಮಾರ್ಗದಲ್ಲಿ ಸಂಚರಿಸಲಿವೆ.

೪ ಬೋಗಿಗಳ ಡೆಮು ಭಾನುವಾರ ಹೊರತುಪಡಿಸಿ ಉಳಿದ ೬ ದಿನ ಸಂಚರಿಸಲಿವೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

<><*<><>*><>

ಬೆಂಗಳೂರು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ-ವಿಟಿಯು, ಕೃತಕ ಬುದ್ಧಿಮತ್ತೆಯನ್ನು ಮೀರಿಸುವ ಭವಿಷ್ಯದ ತಂತ್ರಜ್ಞಾನವಾದ ಆರ್ಟಿಫಿಶಿಯಲ್ ಸೂಪರ್ ಇಂಟೆಲಿಜೆನ್ಸ್ ವಿಷಯವನ್ನು ಶೈಕ್ಷಣಿಕ ಭಾಗವಾಗಿ ಅಳವಡಿಸಿಕೊಳ್ಳಲು ಮುಂದಾಗಿದೆ. ಈ ಕುರಿತಂತೆ ವಿಶ್ವವಿದ್ಯಾಲಯ ಯುನೈಟೆಡ್ ಕಿಂಗ್‌ಡಮ್‌ನಲ್ಲಿರುವ ಚೆಯಾಕ್ ಎಎಸ್‌ಐ ಕಂಪನಿಯ ಜೊತೆ ಒಪ್ಪಂದ ಮಾಡಿಕೊಂಡಿದೆ. ವಿಟಿಯು ಕುಲಪತಿ ಡಾ.ಎಸ್.ವಿದ್ಯಾಶಂಕರ್ ಹಾಗೂ ಚೆಯಾಕ್ ಎಎಸ್‌ಐ ಕಂಪನಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ್ ನಾಗರಾಜು ಈ ಶೈಕ್ಷಣಿಕ ಹಾಗೂ ಸಂಶೋಧನಾ ಒಪ್ಪಂದಕ್ಕೆ ಇಂದು ಸಹಿ ಹಾಕಿದರು. ನಂತರ ಮಾತನಾಡಿದ ಕುಲಪತಿ ಡಾ.ಎಸ್.ವಿದ್ಯಾಶಂಕರ್, ಈ ವಿಷಯ ಅಳವಡಿಕೆಯಿಂದ ವಿಟಿಯು ವಿದ್ಯಾರ್ಥಿಗಳಿಗೆ ಭವಿಷ್ಯದ ತಂತ್ರಜ್ಞಾನವನ್ನು ಪರಿಚಯಿಸಿದಂತಾಗುತ್ತದೆ. ಇದು ೪ ವರ್ಷಗಳ ಅವಧಿಯ ಕೋರ್ಸ್ ಆಗಿದೆ. ಚೆಯಾಕ್ ಸಂಸ್ಥೆ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್ ಹಾಗೂ ಇಂಜಿನಿಯರಿಂಗ್ ಉಪನ್ಯಾಸಕರಿಗೆ ಪಠ್ಯಪುಸ್ತಕಗಳನ್ನು ಉಚಿತವಾಗಿ ನೀಡುತ್ತಿದೆ ಎಂದರು. ಈ ಸಂದರ್ಭದಲ್ಲಿ

ಚೆಯಾಕ್ ಎಎಸ್‌ಐ ಕಂಪನಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ್ ನಾಗರಾಜು ಆಕಾಶವಾಣಿಯೊಂದಿಗೆ ಮಾತನಾಡಿ, ನೂತನ ತಂತ್ರಜ್ಞಾನದ ಬಗ್ಗೆ ವಿವರಿಸಿದರು.

**ಧ್ವನಿ : ಚಂದ್ರಶೇಖರ್ ನಾಗರಾಜು (೨೦ ಸೆಕೆಂಡ್‌ಗಳು)**

**<><*<><>*><>**

ಪ್ರಸಿದ್ಧ ಯಾತ್ರಸ್ಥಳವಾದ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಇದೇ ೧೪ ರಿಂದ ಮಹಾ ಶಿವರಾತ್ರಿ ಜಾತ್ರಾ ಮಹೋತ್ಸವ ಆರಂಭಗೊಳ್ಳಲಿದ್ದು, ಈ ಸಂದರ್ಭದಲ್ಲಿ ಭಕ್ತರ ಸುರಕ್ಷತೆ ದೃಷ್ಟಿಯಿಂದ ಅರಣ್ಯ ಇಲಾಖೆಯ ವ್ಯಾಪಕ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದೆ. ಅರಣ್ಯ ಸಚಿವರ ನಿರ್ದೇಶನದ ಮೇರೆಗೆ ತಾಳುಬೆಟ್ಟದಿಂದ ಮಲೆ ಮಹದೇಶ್ವರ ಬೆಟ್ಟದ ಮಾರ್ಗದಲ್ಲಿ ಕಾಡು ಪ್ರಾಣಿಗಳಿಂದ ಜನರನ್ನು ರಕ್ಷಿಸುವ ಸಲುವಾಗಿ ಬಂದೂಕು ಹಾಗೂ ವಾಕಿಟಾಕಿ ಹೊಂದಿರುವ ೫ ಸಿಬ್ಬಂದಿ ನೇತೃತ್ವದ ೮ ತಂಡ ರಚನೆ ಮಾಡಲಾಗಿದ್ದು, ಪ್ರತಿಯೊಂದು ಕಿಲೋಮೀಟರ್ ದೂರಕ್ಕೆ ಒಂದೊಂದು ತಂಡ ನಿಯೋಜನೆ ಮಾಡಲಾಗಿದೆ ಎಂದು ಮಲೆ ಮಹದೇಶ್ವರ ವನ್ಯಜೀವಿ ಧಾಮದ ಉಪ ಅರಣ್ಯ ಸಂರಕ್ಷಣಾಧಿಕಾರಿ ಭಾಸ್ಕರ್ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**